ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಆಪಿಎ/ಪಿನಿ3/ಪ್ರಾ.ವರ್ಗ/03/2020-21

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 012
ದಿನಾಂಕ: 10/11/2020.

## ಜ್ಞಾಪನ

ವಿಷಯ : 2019-20ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸೆಲಿಂಗ್ ಮೂಲಕ ನಿರ್ವಹಿಸಲು ಅಂತಿಮ ಆದ್ಯತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಈ ಕಚೇರಿಯ ಇದೇ ಸಮ ಸಂಖ್ಯೆಯ ಜ್ಞಾಪನ ದಿನಾಂಕ: 04.11.2020.
2. ಈ ಕಚೇರಿಯ ಇದೇ ಸಮ ಸಂಖ್ಯೆಯ ಜ್ಞಾಪನ ದಿನಾಂಕ: 08.11.2020.

****

2019-20ನೇ ಸಾಲಿಗೆ ಪ್ರಾಂಶುಪಾಲರ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಲಿಂಗ್ ನಡೆಸಲು ವರ್ಗಾವಣೆಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಮಾತ್ರ ಸಲ್ಲಿಸಲು ಉಲ್ಲೇಖಿತ-01ರ ಜ್ಞಾಪನದಲ್ಲಿ ತಿಳಿಸಲಾಗಿತ್ತು.

ಆನ್‌ಲೈನ್ ಮುಖಾಂತರ ಸಲ್ಲಿಕೆಯಾಗಿರುವ ಪ್ರಾಂಶುಪಾಲರಿಂದ ಸ್ವೀಕರಿಸಲ್ಪಟ್ಟ ಕೋರಿಕೆ ವರ್ಗಾವಣೆಗೆ ಅರ್ಹರಿರುವ ಮತ್ತು ಅನರ್ಹರಿರುವ ತಾತ್ಕಾಲಿಕ ಪಟ್ಟಿಯನ್ನು ಉಲ್ಲೇಖ-02ರಲ್ಲಿ ಪ್ರಕಟಿಸಲಾಗಿತ್ತು. ತಾತ್ಕಾಲಿಕ ಪಟ್ಟಿಗೆ ಬಂದಂತಹ ಆಕ್ಷೇಪಣೆಗಳನ್ನು ಪರಿಶೀಲಿಸಿ ಕೋರಿಕೆ ವರ್ಗಾವಣೆಯ ಅಂತಿಮ ಆದ್ಯತಾ ಪಟ್ಟಿಯನ್ನು ಪ್ರತ್ಯೇಕವಾಗಿ ಸಿದ್ಧಪಡಿಸಿ ಪ್ರಕಟಿಸಲಾಗಿರುತ್ತದೆ.

ಆದ್ಯತಾ ಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಪ್ರಾಂಶುಪಾಲರ ಗಮನಕ್ಕೆ ತರಲು ಜಿಲ್ಲಾ ಉಪನಿರ್ದೇಶಕರಿಗೆ ಸೂಚಿಸಿದೆ.

*"ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ"*

ಜಂಟಿ ನಿರ್ದೇಶಕರು(ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ – ಇವರಿಗೆ ಸೂಕ್ತ ಕ್ರಮಕ್ಕಾಗಿ (ಪ್ರಾಂಶುಪಾಲರ ಗಮನಕ್ಕೆ ತರಲು ತಾತ್ಕಾಲಿಕ ಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಲು).
2. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ – ಅಂತರ್ಜಾಲದಲ್ಲಿ ಅಳವಡಿಸಲು.
3. ಕಚೇರಿ / ಹೆಚ್ಚುವರಿ ಪ್ರತಿ.